ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಗುರುವಾರ, ದಿನಾಂಕ : 10 ನೇ ಡಿಸೆಂಬರ್, 2020

ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಗೆ ಬಿಡುಗಡೆಯಾದ ಅನುದಾನ ಬಗ್ಗೆ

ಶ್ರೀ ಬಿ. ಜಿ. ಪಾಟೀಲ್(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –

391 (370) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಗೆ ಪ್ರಸಕ್ತವಾಗಿ ಘೋಷಿಸಲಾದ ಅನುದಾನ ಎಷ್ಟು; ಕಳೆದ ವರ್ಷಕ್ಕೆ ಹೋಲಿಸಿದರೆ ಎಷ್ಟು ಮೊತ್ತ ಕಡಿಮೆಯಾಗಿದೆ; ಇಲ್ಲಿಯವರೆಗೆ ಎಷ್ಟು ಅನುದಾನ ಬಿಡುಗಡೆಯಾಗಿದೆ; (ವಿವರ ನೀಡುವುದು)

(ಆ) ಬಿಡುಗಡೆಯಾದ ಅನುದಾನದಲ್ಲಿ ರೂಪಿಸಲಾದ ಕ್ರಿಯಾ ಯೋಜನೆ ಏನು; ಪೂರ್ಣ ಪ್ರಮಾಣದಲ್ಲಿ ಮಂಡಳಿ ರಚನೆಯಾಗುವುದು ಯಾವಾಗ; (ವಿವರ ನೀಡುವುದು)

(ಇ) ಮಂಡಳಿಯಡಿ ಪ್ರತ್ಯೇಕ ಇಂಜಿನಿಯರಿಂಗ್ ವಿಭಾಗ ರಚನೆಯ ಪ್ರಸ್ತಾಪ ಸರ್ಕಾರದ ಮುಂದಿದೆಯೇ? (ವಿವರ ನೀಡುವುದು)